# Akashvani: Bangalore
# National Bulletin In Kannada
# 26.10.2024 7.35am
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು
********

ಮುಖ್ಯಾಂಶಗಳು:

- ಉಕ್ರೇನ್‌ನಲ್ಲಿನ ಯುದ್ಧದ ಪರಿಸ್ಥಿತಿಯ ಬಗ್ಗೆ ಭಾರತ - ಜರ್ಮನಿ ತೀವ್ರ ಕಳವಳ; ಭಯೋತ್ಪಾದನೆ, ಹಿಂಸಾತ್ಮಕ ಉಗ್ರವಾದಕ್ಕೆ ಪ್ರಧಾನಿ ನರೇಂದ್ರ ಮೋದಿ, ಒಲಾಫ್ ಶೋಲ್ಜ್ ಖಂಡನೆ
- ೨೦೪೭ರ ವೇಳೆಗೆ ವಿಕಸಿತ ಭಾರತ ಕನಸು ನನಸಾಗಿಸಲು ಯುವಜನತೆಗೆ ಉತ್ತಮ ಅವಕಾಶ - ಉಪರಾಷ್ಟ್ರಪತಿ ಜಗದೀಪ್ ಧನಕರ್
- ವಿವಿಧ ರಾಜ್ಯಗಳಲ್ಲಿ ನಡೆಯುವ ೪೭ ವಿಧಾನಸಭಾ ಕ್ಷೇತ್ರಗಳು ಮತ್ತು ವಯನಾಡು ಲೋಕಸಭಾ ಕ್ಷೇತ್ರದ ಉಪಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಅಂತ್ಯ; ಕರ್ನಾಟಕದ ೩ ಕ್ಷೇತ್ರಗಳಿಗೆ ಒಟ್ಟು ೮೩ ಉಮೇದುವಾರಿಕೆ
- ದಕ್ಷಿಣ ಆಫ್ರಿಕಾ ವಿರುದ್ಧದ ೪ ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿ; ಸೂರ್ಯಕುಮಾರ್ ಯಾದವ್ ನಾಯಕತ್ವದಲ್ಲಿ ೧೫ ಸದಸ್ಯರ ಭಾರತ ತಂಡ ಪ್ರಕಟ

******

ಉಕ್ರೇನ್‌ನಲ್ಲಿನ ಯುದ್ಧದ ಸನ್ನಿವೇಶದ ಬಗ್ಗೆ ಭಾರತ ಮತ್ತು ಜರ್ಮನಿ ಆಳವಾದ ಕಳವಳ ವ್ಯಕ್ತಪಡಿಸಿವೆ. ನವದೆಹಲಿಯಲ್ಲಿ ನಿನ್ನೆ ೭ನೇ ಭಾರತ - ಜರ್ಮನಿ ಅಂತರ್ ಸರ್ಕಾರಿ ಸಮಾಲೋಚನೆಗಳ ಸಂದರ್ಭದಲ್ಲಿ ಜಂಟಿ ಹೇಳಿಕೆ ನೀಡಿರುವ ಪ್ರಧಾನಿ ನರೇಂದ್ರ ಮೋದಿ ಮತ್ತು ಜರ್ಮನಿ ಚಾನ್ಸಲರ್ ಒಲಾಫ್ ಶೋಲ್ಜ್ ಅವರು ಅಂತಾರಾಷ್ಟ್ರೀಯ ಕಾನೂನಿನಡಿ ಶಾಂತಿಯ ಸ್ಥಾಪನೆಯ ಕುರಿತು ಒತ್ತಿ ಹೇಳಿದ್ದಾರೆ. ಉಕ್ರೇನ್‌ನಲ್ಲಿನ ಯುದ್ಧದ ಪರಿಸ್ಥಿತಿಯ ನಕಾರಾತ್ಮಕ ಪರಿಣಾಮಗಳನ್ನು ಉಲ್ಲೇಖಿಸಿರುವ ಉಭಯ ನಾಯಕರು ಪ್ರಮುಖವಾಗಿ ಜಾಗತಿಕ ಆಹಾರ ಮತ್ತು ಇಂಧನ ಸುರಕ್ಷತೆ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ. ಅಲ್ಲದೆ ಭಯೋತ್ಪಾದನೆ ಮತ್ತು ಹಿಂಸಾತ್ಮಕ ಉಗ್ರವಾದವನ್ನು ತೀವ್ರವಾಗಿ ಖಂಡಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಭಾರತ ಮತ್ತು ಜರ್ಮನಿ ನಡುವೆ ವಿವಿಧ ವಲಯಗಳ ಸಹಯೋಗದಿಂದ ಎರಡೂ ದೇಶಗಳ ಅಭಿವೃದ್ಧಿ ವೇಗ ಪಡೆಯಲಿದ್ದು, ಯುವ ಜನರಿಗೆ ಹೆಚ್ಚಿನ ಅವಕಾಶಗಳು ಮುಕ್ತವಾಗಲಿವೆ. ವಿಶ್ವದ ಎರಡು ಪ್ರಮುಖ ಪ್ರಜಾಸತ್ತಾತ್ಮಕ ರಾಷ್ಟ್ರಗಳ ಪಾಲುದಾರಿಕೆಯಿಂದ ಯುರೋಪ್, ಏಷ್ಯಾ ಮಾತ್ರವಲ್ಲದೆ ಇಡೀ ಜಗತ್ತು ಪ್ರಯೋಜನ ಪಡೆಯಲಿದೆ ಎಂದು ಹೇಳಿದ್ದಾರೆ. ಕೌಶಲ್ಯಾಭಿವೃದ್ಧಿ ಮತ್ತು ವೃತ್ತಿಪರ ತರಬೇತಿ ವಲಯದಲ್ಲಿ ಐಐಟಿ- ಚೆನ್ನೈ ಮತ್ತು ಜರ್ಮನಿಯ ಡ್ರೆಸ್ ಡೆನ್ ವಿಶ್ವವಿದ್ಯಾಲಯದ ನಡುವೆ ಒಡಂಬಡಿಕೆ ಏರ್ಪಟ್ಟಿದ್ದು ಇದರಿಂದ ಭಾರತದ ಯುವ ಪ್ರತಿಭೆಗೆ ಸೂಕ್ತ ವೇದಿಕೆ ದೊರೆಯಲಿದ್ದು, ಎರಡೂ ದೇಶಗಳ ಸಮೃದ್ಧಿಗೆ ಯುವ ಜನರ ಕೊಡುಗೆ ಹೆಚ್ಚುವ ವಿಶ್ವಾಸವಿದೆ ಎಂದು ಪ್ರಧಾನಿ ಹೇಳಿದರು.

ರಕ್ಷಣೆ ಮತ್ತು ಭದ್ರತೆ ಕ್ಷೇತ್ರದಲ್ಲಿನ ಸಹಯೋಗ ಹೊಸ ಹೆಜ್ಜೆಯಾಗಿದ್ದು, ಪರಸ್ಪರ ಕಾನೂನಾತ್ಮಕ ಒಡಂಬಡಿಕೆಯಿಂದ ಭಯೋತ್ಪಾದನೆ ವಿರುದ್ಧದ ಹೋರಾಟ ಬಲಗೊಳ್ಳಲಿದೆ ಎಂದರು. ಪ್ರಸ್ತುತ ಉಕ್ರೇನ್ ಸಂಘರ್ಷ ಎರಡೂ ದೇಶಗಳಿಗೆ ಚಿಂತೆಯ ವಿಷಯವಾಗಿದ್ದು, ಭಾರತ ಯಾವಾಗಲೂ ಶಾಂತಿಯಿಂದ ಪರಿಹಾರ ಕೈಗೊಳ್ಳುವ ನೀತಿಯನ್ನು ಬೆಂಬಲಿಸುತ್ತದೆ. ಪ್ರಸಕ್ತ ಸ್ಥಿತ್ಯಂತರಗೊಳ್ಳುತ್ತಿರುವ ಜಗತ್ತಿನಲ್ಲಿ ವಿಶ್ವಸಂಸ್ಥೆ ಭದ್ರತಾ ಸಮಿತಿ ಸೇರದಂತೆ ವಿವಿಧ ಜಾಗತಿಕ ಸಂಘಟನೆಗಳ ಸುಧಾರಣೆ ಅತ್ಯವಶ್ಯವಾಗಿದ್ದು, ಭಾರತ ಮತ್ತು ಜರ್ಮನಿ ಈ ನಿಟ್ಟಿನಲ್ಲಿ ಸಕ್ರಿಯ ಸಹಯೋಗ ಮುಂದುವರೆಸಲಿವೆ ಎಂದು ಪ್ರಧಾನಿ ಹೇಳಿದರು. ಜರ್ಮನ್ ಚಾನ್ಸಲರ್ ಓಲಾಫ್ ಸ್ಕ್ಯಾವ್ರುಝ್ ಎರಡು ಪ್ರಮುಖ ಆರ್ಥಿಕತೆಗಳ ನಡುವಿನ ಒಪ್ಪಂದದಿಂದ ಹೂಡಿಕೆ ಮತ್ತು ಉದ್ಯಮಕ್ಕೆ ಹೆಚ್ಚಿನ ಅವಕಾಶಗಳು ದೊರೆಯಲಿದ್ದು, ಎರಡೂ ರಾಷ್ಟ್ರಗಳು ಇದರ ಪ್ರಯೋಜನ ಪಡೆಯಲಿವೆ ಎಂದರು.   ಇದಕ್ಕೂ ಮುನ್ನ, ಅಪರಾಧ ತನಿಖೆ ನೀತಿ, ಹಸಿರು ಹೈಡ್ರೋಜನ್ ವಲಯ, ಉದ್ಯೋಗ ಮತ್ತು ಕಾರ್ಮಿಕ, ವಿಜ್ಞಾನ ಮತ್ತು ತಂತ್ರಜ್ಞಾನ, ಸಂಶೋಧನೆ ಮತ್ತು ಅಭಿವೃದ್ಧಿ ಸೇರಿದಂತೆ ವಿವಿಧ ವಲಯಗಳಲ್ಲಿ ಒಡಂಬಡಿಕೆ ಏರ್ಪಟ್ಟಿತು. ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್, ವಾಣಿಜ್ಯ ಸಚಿವ ಪಿಯೂಷ್ ಗೋಯಲ್, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್, ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸೂಕ್ ಮಾಂಡವೀಯಾ, ಜರ್ಮನಿಯ ಸಚಿವರಾದ ರಾಬರ್ಟ್ ಹಾಬೆಕ್, ಆನಲೀನಾ ಬಾರ್‌ಬಾಕ್, ಬಟಿಂಡಾ ಸ್ಟ್ಯಾಕ್ ಒಡಂಬಡಿಕೆ ಪತ್ರ ವಿನಿಮಯ ಮಾಡಿಕೊಂಡರು.

******

ಚತ್ತೀಸ್‌ಗಢ ಪ್ರವಾಸ ಕೈಗೊಂಡಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಎರಡನೇ ದಿನದ ಕಾರ್ಯಕ್ರಮದಲ್ಲಿ ಭಿಲೈನಲ್ಲಿರುವ ಭಾರತೀಯ ತಂತ್ರಜ್ಞಾನ ಸಂಸ್ಥೆಯ ೪ನೇ ಘಟಿಕೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಅಲ್ಲದೆ ಚತ್ತೀಸ್‌ಗಢ ಪಂಡಿತ್ ದೀನ್ ದಯಾಳ್ ಸ್ಮರಣಾರ್ಥ ಆರೋಗ್ಯ ವಿಜ್ಞಾನ ಮತ್ತು ಆಯುಷ್ ವಿಶ್ವವಿದ್ಯಾಲಯ ಘಟಿಕೋತ್ಸವದಲ್ಲೂ ಭಾಗವಹಿಸಲಿದ್ದಾರೆ. ನಿನ್ನೆ ರಾಷ್ಟ್ರಪತಿ ಅವರು, ಛತ್ತೀಸ್‌ಗಢದ ರಾಯ್‌ಪುರದ ಆಲ್ ಇಂಡಿಯಾ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್‌ನ ಘಟಿಕೋತ್ಸವದಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ದ್ರೌಪದಿ ಮುರ್ಮು, ವೈದ್ಯಕೀಯ ವಿದ್ಯಾರ್ಥಿಗಳು ಹಿಂದುಳಿದ ಪ್ರದೇಶಗಳ ಸೇವೆಗೆ ಆದ್ಯತೆ ನೀಡಬೇಕು. ದೂರದ ಪ್ರದೇಶಗಳಲ್ಲಿ ವಾಸಿಸುವ ಜನರ ಕಲ್ಯಾಣಕ್ಕಾಗಿ ಇತ್ತೀಚಿನ ವೈದ್ಯಕೀಯ ತಂತ್ರಜ್ಞಾನವನ್ನು ಬಳಸಬೇಕು ಎಂದು ಸಲಹೆ ನೀಡಿದರು. ಕಳೆದ ದಶಕದಲ್ಲಿ ದೇಶವಾಸಿಗಳಿಗೆ ಸಾರ್ವತ್ರಿಕ ಆರೋಗ್ಯ ರಕ್ಷಣೆ ಒದಗಿಸಲು ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ರಾಷ್ಟ್ರಪತಿ ಹೇಳಿದರು.

******

ದೇಶದ ಅಭಿವೃದ್ಧಿಗೆ ಶಿಕ್ಷಣ ಮಹತ್ತರ ಕೊಡುಗೆ ನೀಡಲಿದೆ.  ದೇಶಾದ್ಯಂತ ಮಠ-ಮಾನ್ಯಗಳು ಶಿಕ್ಷಣ ಕ್ಷೇತ್ರದೊಂದಿಗೆ ಕೈಜೋಡಿಸಿರುವುದು ಸರ್ಕಾರಕ್ಕೆ ಬಹುದೊಡ್ಡ ಒತ್ತಾಸೆಯಾಗಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ.

ರಾಜ್ಯಕ್ಕೆ ಎರಡು ದಿನಗಳ ಅಧಿಕೃತ ಭೇಟಿ ನೀಡಿರುವ ಅವರು, ನಿನ್ನೆ ಸಂಜೆ ಮಂಡ್ಯದ ಆದಿಚುಂಚನಗಿರಿ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಆದಿಚುಂಚನಗಿರಿ ವಿಶ್ವವಿದ್ಯಾಲಯದಂತಹ ಸಂಸ್ಥೆಗಳು ಭಾರತೀಯ ಸಂಸ್ಕೃತಿಯ ಸಾರವನ್ನು ಸಾರುತ್ತಿದ್ದು, ನೂರಾರು ಶಿಕ್ಷಣ ಸಂಸ್ಥೆಗಳನ್ನು ನಡೆಸುತ್ತಿವೆ. ಯುವ ಸಮೂಹ ದೇಶದ ದೊಡ್ಡ ಶಕ್ತಿಯಾಗಿದೆ. ನಾವೀಗ ಅವಕಾಶಗಳ ಮಹಾಪೂರದ ಯುಗದಲ್ಲಿದ್ದೇವೆ. ೨೦೪೭ರ ವೇಳೆಗೆ ದೇಶವನ್ನು ವಿಕಸಿತ ಭಾರತವನ್ನಾಗಿಸುವ ಕನಸನ್ನು ನನಸಾಗಿಸುವ ಅವಕಾಶ ನಮ್ಮ ಯುವಜನರಿಗೆ ಲಭ್ಯವಾಗಿದೆ ಎಂದರು. ಅತ್ಯಾಧುನಿಕ ವ್ಯವಸ್ಥೆಗಳು ಕೈಗೆಟಕುವಂತೆ ಮಾಡಲು ಸರ್ಕಾರವು ಹಲವು ಯೋಜನೆಗಳನ್ನು ಕೈಗೊಂಡಿದೆ. ಯುವಜನರನ್ನು ಹತಾಶಗೊಳಿಸುತ್ತಿದ್ದ ಭ್ರಷ್ಟಾಚಾರವನ್ನು ತೊಲಗಿಸಲು ಸರ್ವ ಪ್ರಯತ್ನ ನಡೆಯುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದ ಸ್ವಾಮೀಜಿ ಮೊದಲಾದ ಗಣ್ಯರು ಪಾಲ್ಗೊಂಡಿದ್ದರು. ಉಪರಾಷ್ಟ್ರಪತಿ ಜಗದೀಪ್ ಧನಕರ್ ಇಂದು ಬೆಂಗಳೂರಿನಲ್ಲಿ ನಡೆಯಲಿರುವ ಶ್ರೀ ಭಾರತಿ ತೀರ್ಥ ಸ್ವಾಮೀಜಿ ಅವರ ಸನ್ಯಾಸ ಸ್ವೀಕಾರದ ಸುವರ್ಣ ಮಹೋತ್ಸವದ "ನಮಃ ಶಿವಾಯ" ಸ್ತೋತ್ರಮಹಾಸಮರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

******

ವಿವಿಧ ರಾಜ್ಯಗಳಲ್ಲಿ ನಡೆಯುವ ೪೭ ವಿಧಾನಸಭಾ ಕ್ಷೇತ್ರಗಳು ಹಾಗೂ ಕೇರಳದ ವಯನಾಡು ಲೋಕಸಭಾ ಕ್ಷೇತ್ರದ ಉಪಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಿನ್ನೆ ಅಂತ್ಯಗೊಂಡಿದೆ. ಉತ್ತರ ಪ್ರದೇಶದ ೯, ರಾಜಸ್ತಾನದ ೭, ಪಶ್ಚಿಮಬಂಗಾಳದ ೬, ಅಸ್ಸಾಂನ ೫ ಹಾಗೂ ಬಿಹಾರ ಮತ್ತು ಪಂಜಾಬ್‌ನ ತಲಾ ೪, ಕರ್ನಾಟಕದ ೩, ಕೇರಳ, ಮಧ್ಯಪ್ರದೇಶ ಮತ್ತು ಸಿಕ್ಕಿಂನ ತಲಾ ೨ ಹಾಗೂ ಚತ್ತೀಸ್‌ಗಢ, ಗುಜರಾತ್ ಮತ್ತು ಮೇಘಾಲಯದ ತಲಾ ಒಂದು ಕ್ಷೇತ್ರಗಳಿಗೆ ಮುಂದಿನ ತಿಂಗಳ ನವೆಂಬರ್ ೧೩ ರಂದು ಉಪಚುನಾವಣೆ ನಡೆಯಲಿದೆ. ಇದೇ ದಿನ ವಯನಾಡು ಲೋಕಸಭಾ ಕ್ಷೇತ್ರಕ್ಕು ಮತದಾನ ಜರುಗಲಿದೆ. ಮಹಾರಾಷ್ಟ್ರದ ನಾಂದೇಡ್ ಸಂಸದೀಯ ಕ್ಷೇತ್ರ ಹಾಗೂ ಉತ್ತರಾಖಂಡದ ಕೇದಾರನಾಥ ವಿಧಾನಸಭಾ ಕ್ಷೇತ್ರಗಳಿಗೆ ನವೆಂಬರ್ ೨೦ರಂದು ಮತದಾನ ಜರುಗಲಿದೆ. ಎಲ್ಲಾ ಕ್ಷೇತ್ರಗಳ ಮತ ಎಣಿಕೆ ಕಾರ್ಯ ನವೆಂಬರ್ ೨೦ರಂದು ನಡೆಯಲಿದೆ.

******

ಕರ್ನಾಟಕ ರಾಜ್ಯದಲ್ಲಿ ನವೆಂಬರ್ ೧೩ರಂದು ನಡೆಯಲಿರುವ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ನಿನ್ನೆ ಅಂತ್ಯಗೊಂಡಿದೆ. ಈ ಮೂರು ಕ್ಷೇತ್ರಗಳಿಂದ ಒಟ್ಟು ೮೩ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಶಿಗ್ಗಾವಿ ಕ್ಷೇತ್ರದಿಂದ ೨೬, ಸಂಡೂರು ಕ್ಷೇತ್ರದಿಂದ ೭ ಹಾಗೂ ಚನ್ನಪಟ್ಟಣ ಕ್ಷೇತ್ರದಿಂದ ೫೦ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

******

ನ್ಯಾಯಾಂಗ ಸೇರಿದಂತೆ ಇತರೆ ಕ್ಷೇತ್ರಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿನಿಧಿಸುವಂತೆ ಮುಖ್ಯ ನ್ಯಾಯಮೂರ್ತಿ ಡಾ. ಡಿ.ವೈ. ಚಂದ್ರಚೂಡ್ ಕರೆ ನೀಡಿದ್ದಾರೆ. ಆಕಾಶವಾಣಿ ಸುದ್ದಿ ವಿಭಾಗಕ್ಕೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು ಮಾತನಾಡಿ, ಹೆಚ್ಚಿನ ಮಹಿಳಾ ಪ್ರಾತಿನಿಧ್ಯವು ಮಹಿಳೆಯರ ಜೀವನದ ಅನುಭವಗಳನ್ನು ಹೆಚ್ಚು ತೋರ್ಪಡಿಸಲಿದೆ. ವೈವಿಧ್ಯಮಯ ದೃಷ್ಟಿಕೋನಗಳೊಂದಿಗೆ ಅವರು ತೆಗೆದುಕೊಳ್ಳುವ ನಿರ್ಧಾರವನ್ನು ಸಮೃದ್ಧಗೊಳಿಸುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ದೇಶದಾದ್ಯಂತ ಜಿಲ್ಲಾ ನ್ಯಾಯಾಂಗಕ್ಕೆ ನಡೆಯುವ ಮುಕ್ತ ನೇಮಕಾತಿ ಪರೀಕ್ಷೆಗಳಲ್ಲಿ, ಶೇಕಡಾ ೫೦ ಕ್ಕಿಂತ ಹೆಚ್ಚು ಮಹಿಳೆಯರು ಎಂದು ಅವರು ಹೆಮ್ಮೆ ವ್ಯಕ್ತಪಡಿಸಿದ್ದಾರೆ. ಇದು ಭವಿಷ್ಯದಲ್ಲಿ ಹೆಚ್ಚಿನ ಮಹಿಳೆಯರು ನ್ಯಾಯಾಂಗದಲ್ಲಿನ ಉನ್ನತ ಸ್ಥಾನಗಳಿಗೆ ಏರಲು ದಾರಿ ಮಾಡಿಕೊಡಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

******

ದೆಹಲಿಯಲ್ಲಿ ನಿನ್ನೆ ನಡೆದ ರಾಷ್ಟ್ರೀಯ ಕಲಿಕಾ ಸಪ್ತಾಹ ೨೦೨೪ರ ಬಹುಮಾನ ವಿತರಣೆ ಸಮಾರಂಭ ಮತ್ತು **iGOT** ಲ್ಯಾಬ್ ಮತ್ತು ಕಲಿಕಾ ಕೇಂದ್ರದ ಉದ್ಘಾಟನೆ ಮತ್ತು ಕರ್ಮಯೋಗಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ವಾರ್ತಾ ಮತ್ತು ಪ್ರಸಾರ ಕಾರ್ಯದರ್ಶಿ ಸಂಜಯ್ ಜಾಜು, ವಿಶೇಷ ಕಾರ್ಯದರ್ಶಿ ನೀರಜಾ ಶೇಖರ್, ಸಚಿವಾಲಯದ ಹಿರಿಯ ಅಧಿಕಾರಿಗಳು ಮತ್ತು ಉನ್ನತ ಸಾಧಕರು ಉಪಸ್ಥಿತರಿದ್ದರು.

******

ದಕ್ಷಿಣ ಆಫ್ರಿಕಾ ವಿರುದ್ಧ ನಡೆಯಲಿರುವ ೪ ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಗಾಗಿ ಭಾರತ ತಂಡ ಪ್ರಕಟಿಸಲಾಗಿದೆ. ನವೆಂಬರ್ ೮ ರಿಂದ ದರ್ಬಾನ್‌ಲ್ಲಿ ಸರಣಿ ಆರಂಭವಾಗಲಿದ್ದು, ವೇಗದ ಬೌಲರ್ ಕರ್ನಾಟಕದ ವಿಜಯ್ ಕುಮಾರ್ ವೈಶಾಖ್ ಹಾಗೂ ಮಧ್ಯಮ ಕ್ರಮಾಂಕದ ಬ್ಯಾಟ್ಸ್‌ಮನ್ ರಮಣ್‌ದೀಪ್ ಸಿಂಗ್ ತಂಡದಲ್ಲಿ ಸ್ಥಾನ ಪಡೆದಿರುವ ಹೊಸ ಆಟಗಾರರಾಗಿದ್ದಾರೆ. ರಾಷ್ಟ್ರೀಯ ಕ್ರಿಕೆಟ್ ಆಯ್ಕೆ ಸಮಿತಿ ನಿನ್ನೆ ಭಾರತ ತಂಡವನ್ನು ಪ್ರಕಟಿಸಿದ್ದು, ಸೂರ್ಯಕುಮಾರ್ ಯಾದವ್ ನಾಯಕರಾಗಿದ್ದಾರೆ. ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ಅವರಿಗೂ ಸ್ಥಾನ ಕಲ್ಪಿಸಲಾಗಿದೆ. ಭಾರತದ ೧೫ ಸದಸ್ಯರ ತಂಡ ಹೀಗಿದೆ : ಸೂರ್ಯಕುಮಾರ್ ಯಾದವ್, ಅಭಿಷೇಕ್ ಶರ್ಮಾ, ಸಂಜು ಸ್ಯಾಮ್‌ಸನ್, ರಿಂಕು ಸಿಂಗ್, ತಿಲಕ್ ವರ್ಮಾ, ಜಿತೇಶ್ ಶರ್ಮಾ, ಹಾರ್ದಿಕ್ ಪಾಂಡ್ಯ, ಅಕ್ಷರ್ ಪಟೇಲ್, ರಮಣ್‌ದೀಪ್ ಸಿಂಗ್, ವರುಣ್ ಚಕ್ರವರ್ತಿ, ರವಿ ಬಿಷ್ಣೋಯ್, ಅರ್ಷದೀಪ್ ಸಿಂಗ್, ವಿಜಯಕುಮಾರ್ ವೈಶಾಖ್, ಆವೇಶ್ ಖಾನ್ ಮತ್ತು ಯಶ್ ದಯಾಳ್ ಸ್ಥಾನ ಪಡೆದಿದ್ದಾರೆ.

******